# FEBRUARY 11, 2026
# AKASHAVANI - DHARWAD
# PRADESH SAAMACHARA (KANNADA) 12 PM

<><><>

ಜಲಜೀವನ್ ಮಿಷನ್ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಲಜೀವನ್ ಮಿಷನ್ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ಜಿಲ್ಲೆಯಲ್ಲಿ 650 ಕಾಮಗಾರಿಗಳು ಪೂರ್ಣಗೊಂಡಿವೆ. ಇದಕ್ಕಾಗಿ 482 ಕೋಟಿ ರೂಪಾಯಿ ವ್ಯಯಿಸಲಾಗಿದೆ. ಶೇಕಡಾ 84 ಕಾಮಗಾರಿಗಳು ಮಾತ್ರ ಪೂರ್ಣಗೊಂಡಿದ್ದು ಇನ್ನುಳಿದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಹೇಳಿದರು.

<><><>

ತಂತ್ರಜ್ಞಾನ ಯುಗದಲ್ಲಿ ಅಂತರ್ಜಾಲವನ್ನು ಎಚ್ಚರಿಕೆಯಿಂದ ಬಳಸಬೇಕು ಹಾಗೂ ಅನಗತ್ಯ ಲಿಂಕ್‌ಗಳನ್ನು ತೆರೆದು ವಂಚನೆಗೆ ಒಳಗಾಗಬಾರದು ಎಂದು ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಹೇಳಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ವಿಶ್ವ ಸುರಕ್ಷಿತ ಅಂತರ್ಜಾಲ ದಿನದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅಂತರ್ಜಾಲ ಬಳಕೆ ಹೆಚ್ಚಾದಂತೆ ಆನ್‌ಲೈನ್ ವಂಚನೆಗಳು ಹೆಚ್ಚಾಗಿದ್ದು, ಬಹುತೇಕ ವಿದ್ಯಾವಂತರೇ ಈ ವಂಚನೆಗಳಿಗೆ ಒಳಗಾಗುತ್ತಿದ್ದಾರೆ. ವೈಯಕ್ತಿಕ ಮಾಹಿತಿಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವುದು, ಆನ್‌ಲೈನ್ ಮೂಲಕ ಹೂಡಿಕೆ ಮಾಡುವುದು, ಅವಶ್ಯವಲ್ಲದ ಲಿಂಕ್‌ಗಳನ್ನು ತೆರೆಯುವ ಮೂಲಕ ವಂಚನೆಗಳಿಗೆ ಒಳಗಾಗುತ್ತಿದ್ದು, ಇವುಗಳನ್ನು ತಡೆಯಲು ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವ ಕಾರ್ಯವಾಗಬೇಕಿದೆ ಎಂದರು.

<><><>

ಸುರಕ್ಷಿತ ಬ್ಯಾಂಕಿಂಗ್ ವ್ಯವಹಾರ, ಹಣಕಾಸು ಸಾಕ್ಷರತೆ ಹಾಗೂ ಕೆವೈಸಿ ಕುರಿತು ಜಿಲ್ಲೆಯಾದ್ಯಂತ ಸಾರ್ವಜನಿಕ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾಕ್ಟರ್ ದಿಲೀಷ್ ಶಶಿ, ಲೀಡ್ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕಾರವಾರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯುವ ಹಣಕಾಸು ಸಾಕ್ಷರತಾ ಸಪ್ತಾಹ ಕಾರ್ಯಕ್ರಮದ ಕುರಿತ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಿ ನಂತರ ಮಾತನಾಡಿದ ಅವರು, ಸಾರ್ವಜನಿಕರು ಬ್ಯಾಂಕಿಂಗ್ ವಂಚನೆಗಳ ಕುರಿತು ಜಾಗೃತರಾಗಿ, ಸುರಕ್ಷಿತವಾಗಿ ಹಣಕಾಸು ವ್ಯವಹಾರಗಳನ್ನು ನಡೆಸುವ ಕುರಿತು ಎಲ್ಲಾ ಬ್ಯಾಂಕ್‌ಗಳು ತಮ್ಮ ಗ್ರಾಹಕರಿಗೆ ಅರಿವು ಮೂಡಿಸಬೇಕು. ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಆನ್‌ಲೈನ್ ವಂಚನೆಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದರು.

<><><>

ಮಾನವ ಕುಲಕ್ಕೆ ಸಿದ್ಧಾರೂಢರು ನೀಡಿದ ತತ್ವಾದರ್ಶಗಳು ಇಂದಿಗೂ ಪ್ರಸ್ತುತವಾಗಿದ್ದು, ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಭಕ್ತರ ಮೇರ್ಲ್ಮನೆ ಸಭೆ ಅಧ್ಯಕ್ಷರಾದ ಡಿ.ಆರ್.ಪಾಟೀಲ್ ಹೇಳಿದ್ದಾರೆ. ಶ್ರೀ ಸಿದ್ಧಾರೂಢ ಮಹಾಸ್ವಾಮಿಯವರ ಮಠ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ 2026 ನೇ ಸಾಲಿನ ಶಿವರಾತ್ರಿ ಜಾತ್ರ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಸಂಗೀತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಧ್ವನಿ– ಡಿ.ಆರ್.ಪಾಟೀಲ್( 47 ಸೆಕೆಂದುಗಳು)

ನಂತರ ಹಿಂದೂಸ್ತಾನಿ ಹಿರಿಯ ಗಾಯಕರಾದ ಪಂಡಿತ ಎಂ.ವೆಂಕಟೇಶಕುಮಾರ, ಡಾಕ್ಟರ್ ಪದ್ಮಿನಿ ಓಕ್, ವೈಷವಿ ಹಾನಗಲ್ ಸೇರಿದಂತೆ ವಿವಿಧ ಕಲಾವಿದರಿಂದ ಗಾಯನ, ವಯೋಲಿನ್ ವಾದನ ಹಾಗೂ ನೃತ್ಯ ಪ್ರದರ್ಶನಗೊಂಡವು. ಇಂದು ಸಂಜೆ ಡಾಕ್ಟರ್ ವೀಣಾ ಸವದತ್ತಿ, ಯಮುನಾ ಬೆಳಗಲಿ, ಐಶ್ವರ್ಯ ದೇಸಾಯಿ, ಕವಿತಾ ಕಲಬುರ್ಗಿ, ಶೇಷಗಿರಿ ಗುಡಿ, ಸೇರಿದಂತೆ ವಿವಿಧ ಕಲಾವಿದರಿಂದ ಗಾಯನ, ಭಾಗ್ಯಶ್ರೀ ಹೂಗಾರ ಅವರ ಸಿತಾರ ವಾದನ, ಅಂಕಿತಾ ರೇವಣಕರ ಅವರಿಂದ ಜಾನಪದ ನೃತ್ಯ ಪ್ರದರ್ಶನಗೊಳ್ಳಲಿವೆ.

<><><>

ವಿಜಯನಗರ ಜಿಲ್ಲೆಯ ಕೊಟ್ಟೂರು ತಾಲ್ಲೂಕಿನಲ್ಲಿ ನಾಳೆ ಕೊಟ್ಟೂರು ಜಾತ್ರಾ ಮಹೋತ್ಸವ ಜರುಗಲಿದೆ. ಜಾತ್ರಾ ಪ್ರಯುಕ್ತ ಯಾವುದೇ ಅಹಿತಕರ ಘಟನೆ ಜರುಗದಂತೆ, ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಕೊಟ್ಟೂರು ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಇಂದು ಸಂಜೆ 6 ಗಂಟೆಯಿಂದ ನಾಳೆ ಸಂಜೆ 6 ಗಂಟೆಯವರೆಗೆ ಮದ್ಯದಂಗಡಿ, ಬಾರ್ ಆ್ಯಂಡ್ ರೆಸ್ಟೋರೆಂಟ್ ಹಾಗೂ ಇತರೆ ಸ್ಥಳಗಳಲ್ಲಿ ಮದ್ಯ ಮಾರಾಟ ಸಾಗಾಣೆ ಮಾಡದಂತೆ ಮತ್ತು ಮದ್ಯದಂಗಡಿ ಮುಚ್ಚುವಂತೆ ನಿಷೇಧಾಜ್ಞೆ ಜಾರಿಗೊಳಿಸಿ, ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಆದೇಶಿಸಿದ್ದಾರೆ.

<><><>

ಕಾಯಕದಿಂದ ಮಾತ್ರ ಮುಕ್ತಿ ಸಾಧ್ಯ ಎಂದು ಕಾಯಕ ಶರಣರು ವಚನಗಳ ಮೂಲಕ ಸಮಾಜಕ್ಕೆ 12 ನೇ ಶತಮಾನದಲ್ಲಿ ಸಾರಿದ್ದಾರೆ ಎಂದು ಹಾಸನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಮಂಜಯ್ಯ ಹೇಳಿದ್ದಾರೆ. ಹಾಸನ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಾಸನಾಂಬ ಕಲಾಕ್ಷೇತ್ರದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶರಣರ ವಚನಗಳ ಆದರ್ಶವನ್ನು ಯುವ ಪೀಳಿಗೆ ಪಾಲಿಸಿಬೇಕು. ಕಾಯಕ ಶರಣರ ವಚನಗಳಲ್ಲಿನ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>